**Bangalore**
**Regional News**
**17.06.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

೧. ಇಸ್ರೇಲ್, ಇರಾನ್‌ನಲ್ಲಿ ಸಿಲುಕಿರುವ ರಾಜ್ಯದ ವಿದ್ಯಾರ್ಥಿಗಳನ್ನು ಶೀಘ್ರದಲ್ಲೇ ಕರೆತರಲು ಯತ್ನ - ಮುಖ್ಯಮಂತ್ರಿ ಭರವಸೆ

೨. ರಾಜ್ಯದ ೬ ಕಡೆ ಕೌಶಲ್ಯ ಪ್ರಯೋಗಾಲಯ ನಿರ್ಮಿಸಲು ಸರ್ಕಾರ ನಿರ್ಧಾರ

೩. ಎತ್ತಿನಹೊಳೆ ಯೋಜನೆಗಾಗಿ ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಐಐಎನ್ ಪ್ಲಾಟಿನಂ ೨೦೨೫ ರಾಷ್ಟ್ರೀಯ ಪ್ರಶಸ್ತಿ

೪. ಮುಂಗಾರು ಮಳೆಗೆ ಮೆಸ್ಕಾಂ ವ್ಯಾಪ್ತಿಯಲ್ಲಿ ೬ ಕೋಟಿ ೪೫ ಲಕ್ಷಕ್ಕೂ ಅಧಿಕ ಮೊತ್ತದ ಆಸ್ತಿಗಳಿಗೆ ಹಾನಿ

೫. ಕೋಲಾರದಲ್ಲಿ ಮಾವು ಬೆಲೆ ಕುಸಿತ ; ೧೫ ಸಾವಿರ ಬೆಂಬಲ ಬೆಲೆ ಘೋಷಿಸುವಂತೆ ಸರ್ಕಾರಕ್ಕೆ ಬೆಳೆಗಾರರ ಆಗ್ರಹ

**<><*<><>*><>**

ಸಂಘರ್ಷ ಪೀಡಿತ ಇಸ್ರೇಲ್ ಮತ್ತು ಇರಾನ್‌ನಲ್ಲಿ ಸಿಲುಕಿರುವ ರಾಜ್ಯದ ವಿದ್ಯಾರ್ಥಿಗಳನ್ನು ಶೀಘ್ರದಲ್ಲೇ ಮರಳಿ ಕರೆ ತರಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಲ್ಲಿನ ವಿಮಾನ ನಿಲ್ದಾಣಗಳು ಪ್ರಸ್ತುತ ಮುಚ್ಚಲ್ಪಟ್ಟಿದ್ದು, ಒಂದು ಅಥವಾ ಎರಡು ದಿನಗಳಲ್ಲಿ ತೆರೆಯಬಹುದು. ತೆರೆದ ಕೂಡಲೇ ತಕ್ಷಣವೇ ರಾಜ್ಯಕ್ಕೆ ವಿದ್ಯಾರ್ಥಿಗಳನ್ನು ಕರೆ ತರಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳು ಮತ್ತು ಸಂಬಂಧಪಟ್ಟ ಅಧಿಕಾರಿಗಳು ಸಿಬ್ಬಂದಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಮಂಗಳೂರಿನಲ್ಲಿ ನಿರ್ಮಾಣಗೊಳ್ಳುತ್ತಿರುವ ರಾಜೀವ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿ ೨೦೨೬ರ ಸೆಪ್ಟೆಂಬರ್ ವೇಳೆಗೆ ಪೂರ್ಣಗೊಳ್ಳಲಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಪ್ರಾದೇಶಿಕ ಕಚೇರಿ ಕಟ್ಟಡ ಕಾಮಗಾರಿಯನ್ನು ಇಂದು ವೀಕ್ಷಿಸಿದ ಬಳಿಕ ಮಾತನಾಡಿದ ಅವರು, ಈ ಪ್ರಾದೇಶಿಕ ಕಚೇರಿ ಕಟ್ಟಡದಲ್ಲಿ ಕೌಶಲ್ಯ ಪ್ರಯೋಗಾಲಯ ಹಾಗೂ ಸ್ಪೋರ್ಟ್ಸ್ ಹಬ್ ಸುಮಾರು ೪೯ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿದೆ ಎಂದು ಹೇಳಿದ್ದಾರೆ. ಮಂಗಳೂರು, ಕಲಬುರಗಿ, ಮೈಸೂರು, ಹುಬ್ಬಳ್ಳಿ, ಬೆಂಗಳೂರು, ದಾವಣಗೆರೆ ಸೇರಿ ಆರು ಕಡೆಗಳಲ್ಲಿ ಕೌಶಲ್ಯ

ಪ್ರಯೋಗಾಲಯ ನಿರ್ಮಾಣ ಮಾಡಲಾಗುತ್ತಿದೆ. ದಾವಣಗೆರೆ ಹಾಗೂ ಕಲಬುರಗಿಯ ಕಟ್ಟಡ ಕಾಮಗಾರಿ ಪೂರ್ಣಗೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಆಕ್ವಡಕ್ಟ್ ಇಂಜಿನಿಯರಿಂಗ್ ತಂತ್ರಜ್ಞಾನದ ಮೂಲಕ ಆರೋಗ್ಯ, ಸುರಕ್ಷತೆ, ಪರಿಸರ ಸ್ನೇಹಿ ಮಾದರಿಯಲ್ಲಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ ಜಾರಿ ಮಾಡಿರುವ ಹಿನ್ನೆಲೆಯಲ್ಲಿ ರಾಜ್ಯ ಜಲಸಂಪನ್ಮೂಲ ಇಲಾಖೆ ವ್ಯಾಪ್ತಿಯ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತಕ್ಕೆ ೨೦೨೫ನೇ ಸಾಲಿನ ಪ್ರತಿಷ್ಠಿತ ಐಐಎನ್ ಪ್ಲಾಟಿನಮ್ ರಾಷ್ಟ್ರೀಯ ಪ್ರಶಸ್ತಿ ಲಭಿಸಿದೆ. ಮೂಲಸೌಕರ್ಯ ಕ್ಷೇತ್ರದಲ್ಲಿ ಕೌಶಲ್ಯ ಅಭಿವೃದ್ಧಿ, ತಂತ್ರಜ್ಞಾನ ಆವಿಷ್ಕಾರಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ರೂಪಿತವಾಗಿರುವ ಇನ್ಫ್ರಾಸ್ಟ್ರಕ್ಚರ್ ಸ್ಕಿಲ್ ಡೆವಲಪ್ಮೆಂಟ್ ಅಕಾಡೆಮಿ ಸಂಸ್ಥೆಯು ವಿಜೆಎನ್ಎಲ್ ಗೆ ನವದೆಹಲಿಯಲ್ಲಿ ಈ ಪ್ರಶಸ್ತಿ ನೀಡಿದೆ. ವಿಜೆಎನ್ಎಲ್ ವ್ಯವಸ್ಥಾಪಕ ನಿರ್ದೇಶಕರಾದ ಸಣ್ಣಚಿತ್ತಯ್ಯ ಹಾಗೂ ಅಧಿಕಾರಿಗಳ ತಂಡ ಇಂದು ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಪ್ರಶಸ್ತಿ ಫಲಕದೊಂದಿಗೆ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು. ಈ ಯೋಜನೆಯಲ್ಲಿ ಅವಳಿ ತೊಟ್ಟಿಗಳು, ಸರ್ವೀಸ್ ರಸ್ತೆಗಳ ಸಮನ್ವಯತೆಯಿಂದ ಕಾರ್ಯಾಚರಣೆ ದಕ್ಷತೆಗಾಗಿ ಹೊಸ ವಿನ್ಯಾಸವನ್ನು ರೂಪಿಸಲಾಗಿದೆ.

<><*<><>*><>

ಸಭಾಧ್ಯಕ್ಷ ಯು.ಟಿ. ಖಾದರ್ ಅಧ್ಯಯನಕ್ಕಾಗಿ ಮಲೇಷಿಯಾ ಪ್ರವಾಸ ಕೈಗೊಂಡಿದ್ದಾರೆ. ಅಲ್ಲಿ ಅವರು ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಅಸೋಷಿಯೇಷನ್, ಮಲೇಷಿಯಾದ ಜಂಟಿ ಅಧ್ಯಕ್ಷ ಡಾ. ಜೋಹಾರಿ ಬಿನ್ ಅಬ್ದುಲ್ ಅವರನ್ನು ಕೌಲಾಲಂಪುರದ ಸಂಸತ್ ಭವನದಲ್ಲಿ ಭೇಟಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಉಭಯ ನಾಯಕರು ಪ್ರಜಾಪ್ರಭುತ್ವ ತತ್ವಗಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿದರು. ಭವಿಷ್ಯದಲ್ಲಿ ಕರ್ನಾಟಕ ಹಾಗೂ ಮಲೇಷಿಯಾದ ರಾಜಕೀಯ ಸಂಸದೀಯ ವ್ಯವಹಾರಗಳು ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬಲಪಡಿಸುವ ಬಗ್ಗೆ ಚರ್ಚೆ ನಡೆಸಿದರು.

<><*<><>*><>

ವಿಜಯನಗರ ಜಿಲ್ಲೆಯು ವಿಶ್ವವಿಖ್ಯಾತ ಹಂಪಿ ಸೇರಿದಂತೆ ಹಲವಾರು ಪ್ರವಾಸಿ ತಾಣಗಳನ್ನು ಹೊಂದಿರುವುದರಿಂದ ಮೇಲ್ಸೇತುವೆ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯ ಹಲವಾರು ರಸ್ತೆ ಕಾಮಗಾರಿಗಳು ನಿಧಾನ ಗತಿಯಲ್ಲಿ ಸಾಗಿದ್ದು, ಅಧಿಕಾರಿಗಳು ಎರಡು ತಿಂಗಳಿಗೊಮ್ಮೆ ವರದಿ ನೀಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯ ಹೆದ್ದಾರಿ, ಸೇತುವೆ ಮತ್ತು ಮೇಲ್ ಸೇತುವೆಗಳ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

ಮುಂಗಾರು ಗಾಳಿ ಮಳೆಯ ಆರ್ಭಟಕ್ಕೆ ಮೆಸ್ಕಾಂ ವ್ಯಾಪ್ತಿಯಲ್ಲಿ ಇದುವರೆಗೆ ೬ ಕೋಟಿ ೪೫ ಲಕ್ಷದ ೬೩ ಸಾವಿರ ರೂಪಾಯಿಗೂ ಅಧಿಕ ಮೊತ್ತದ ಆಸ್ತಿಗಳಿಗೆ ಹಾನಿಯಾಗಿದೆ ಎಂದು ಮೆಸ್ಕಾಂ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಏಪ್ರಿಲ್ ತಿಂಗಳಿನಿಂದ ಜೂನ್ ೧೫ರ ಅವಧಿಯಲ್ಲಿ ಗಾಳಿ, ಮಳೆಗೆ ಮೆಸ್ಕಾಂ ವ್ಯಾಪ್ತಿಯ ದಕ್ಷಿಣ ಕನ್ನಡ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಅತಿ ಹೆಚ್ಚು ಹಾನಿ ಸಂಭವಿಸಿದೆ. ೧೦ ಸಾವಿರದ ೫೮೩ ವಿದ್ಯುತ್ ಕಂಬಗಳು ಧರಾಶಾಯಿಯಾಗಿವೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೬ ಕೋಟಿ ೯೧ ಲಕ್ಷದ ೩೭ ಸಾವಿರ ರೂಪಾಯಿ ಹಾಗೂ ಚಿಕ್ಕಮಗಳೂರು ಜಿಲ್ಲೆಯಲ್ಲಿ ೩ ಕೋಟಿ ೮೫ ಲಕ್ಷದ ೬೦ ಸಾವಿರ ರೂಪಾಯಿ ಮೊತ್ತದ ಆಸ್ತಿಗಳಿಗೆ ಹಾನಿಯಾಗಿದೆ. ಉಳಿದಂತೆ ಉಡುಪಿ ಜಿಲ್ಲೆಯಲ್ಲಿ ೩ ಕೋಟಿ ೭೩ ಲಕ್ಷದ ೫೩ ಸಾವಿರ ರೂಪಾಯಿ ಮತ್ತು ಶಿವಮೊಗ್ಗದಲ್ಲಿ ೧ ಕೋಟಿ ೯೫ ಲಕ್ಷದ ೧೪ ಸಾವಿರ ರೂಪಾಯಿ ಮೊತ್ತದ ಮೆಸ್ಕಾಂ ಆಸ್ತಿಗಳು ಹಾನಿಗೊಳಗಾಗಿದೆ. ಹಾನಿಗೊಳಗಾದ ಬಹುತೇಕ ವಿದ್ಯುತ್ ಕಂಬಗಳು ಪರಿವರ್ತಕಗಳು ಹಾಗೂ ವಿದ್ಯುತ್ ಮಾರ್ಗಗಳನ್ನು ಬದಲಾಯಿಸಿ ವಿದ್ಯುತ್ ಪೂರೈಕೆ ಸುಗಮಗೊಳಿಸಲಾಗಿದೆ ಎಂದು ಮೆಸ್ಕಾಂ ತಿಳಿಸಿದೆ.

<><*<><>*><>

ಕೋಲಾರದಲ್ಲಿ ಮಾವು ಬೆಳೆಗೆ ಬೆಲೆ ಇಲ್ಲದೆ ಕುಸಿತ ಕಂಡಿರುವ ಹಿನ್ನೆಲೆಯಲ್ಲಿ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಸರಕಾರ ಕೂಡಲೇ ಪ್ರತಿಟನ್‌ಗೆ ೧೫ ಸಾವಿರ ರೂಪಾಯಿ ಬೆಂಬಲ ಬೆಲೆ ಘೋಷಣೆ ಮಾಡಬೇಕು. ಇಲ್ಲವಾದಲ್ಲಿ ಇಂದಿನಿಂದಲೇ ಹೋರಾಟ ನಡೆಸಲಾಗುವುದು ಎಂದು ಮಾವು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ನೀಲಟೂರು ಚಿನ್ನಪ್ಪರೆಡ್ಡಿ ಎಚ್ಚರಿಕೆ ನೀಡಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಜನಪ್ರತಿನಿಧಿಗಳು ಮಾವು ಬೆಳೆಗಾರರ ಸಮಸ್ಯೆಗೆ ಆಸಕ್ತಿ ತೋರಿಲ್ಲ ಎಂದು ದೂರಿದ್ದಾರೆ. ಆಂಧ್ರ ಪ್ರದೇಶದಲ್ಲಿ ತಕ್ಷಣ ಬೆಂಬಲ ಬೆಲೆ ಘೋಷಣೆಯಾಗಿದೆ. ಕೂಡಲೇ ಆಂಧ್ರ ಪ್ರದೇಶ ಸರಕಾರದ ಮಾದರಿ ಮಾವು ಬೆಳೆಗಾರರಿಗೆ ಬೆಂಬಲ ಬೆಲೆಯನ್ನು ಘೋಷಿಸುವ ಮೂಲಕ ರಾಜ್ಯ ಸರಕಾರ ರೈತರ ಪರವಾಗಿ ನಿಲ್ಲಬೇಕೆಂದು ಆಗ್ರಹಿಸಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಇದೇ ೨೧ ರಂದು ಜಿಲ್ಲೆಯ ದೇವನಹಳ್ಳಿಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾಡಳಿತದಿಂದ ಸಲಕ ಸಿದ್ದತೆಗಳನ್ನು ಕೈಗೊಳ್ಳಲಾಗುತ್ತಿದೆ. ಅಗತ್ಯ ಸಿದ್ಧತೆ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ, ಪರೀಕ್ಷಾ ವಿಭಾಗದಲ್ಲಿ ಜರುಗಿದ ಅಕ್ರಮಗಳ ಬಗ್ಗೆ ತನಿಖೆ ಮಾಡಲು ಬೆಳಗಾವಿಯ ನಿವೃತ್ತ ಜಿಲ್ಲಾ ನ್ಯಾಯಾಧೀಶರ ಡಿ.ಎಸ್.ಶಿಂಧೆ ಅವರನ್ನು ನೇಮಕ ಮಾಡಲಾಗಿದೆ. ಈ ಬಗ್ಗೆ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಮಾತನಾಡಿ, ವಿಶ್ವವಿದ್ಯಾಲಯದಲ್ಲಿ ಕಾನೂನು ಬಾಹಿರವಾಗಿ ಘಟಿಕೋತ್ಸವ ಪ್ರಮಾಣ ಪತ್ರ ವಿತರಣೆ

ಪ್ರಕರಣ, ಹಾಗೂ ಕೆಲ ಕಾನೂನುಬಾಹಿರ ಆದೇಶಗಳ ಕುರಿತಂತೆ ಕುಲಾಧಿಪತಿಗಳ ಕಛೇರಿಯಲ್ಲಿ ದಾಖಲಾದ ಸಾರ್ವಜನಿಕ ಹಿತಾಸಕ್ತಿ ದೂರಿನ ಪ್ರಕರಣಗಳ ಕುರಿತಂತೆ ವಿಚಾರಣೆ ನಡೆಸಲು ತನಿಖಾಧಿಕಾರಿಯನ್ನು ನೇಮಿಸಿ ಆದೇಶ ಜಾರಿಗೊಳಿಸಲಾಗಿದೆ. . ೪೫ ದಿನಗಳ ಒಳಗಾಗಿ ತನಿಖೆ ಕೈಗೊಂಡು ವಿಶ್ವವಿದ್ಯಾಲಯಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ. ತನಿಖಾ ವರದಿಗಳು ವಿಶ್ವವಿದ್ಯಾಲಯಕ್ಕೆ ಸಲ್ಲಿಕೆಯಾದ ಕೂಡಲೇ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಾಗುವುದೆಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕುಡಿಯುವ ಶುದ್ಧ ನೀರಿನ ಪೂರೈಕೆಗೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಆನಂದ್ ತಿಳಿಸಿದ್ದಾರೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಸುಸ್ಥಿರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನತೆಗೆ ದಿನದ ೨೪ ಗಂಟೆಯೂ ನೀರು ಪೂರೈಕೆ ಮಾಡುವಲ್ಲಿ ಅಧಿಕಾರಿಗಳು ಆದ್ಯತೆ ನೀಡಬೇಕು. ಜಲಜೀವನ್ ಮಿಷನ್‌ನಡಿ ಪ್ರತಿ ಮನೆಗಳಿಗೂ ನೀರಿನ ಸಂಪರ್ಕ ಒದಗಿಸಲಾಗಿದ್ದು, ನೀರಿನ ಸದ್ಭಳಕೆಯಾಗಬೇಕು ಎಂದು ಸೂಚನೆ ನೀಡಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ನೈಋತ್ಯ ಮಾನ್ಸೂನ್ ಸಕ್ರಿಯವಾಗಿದ್ದು, ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಭಾಗಮಂಡಲ ೧೯, ಗೇರುಸೊಪ್ಪೆ ೧೭, ಆಗೊಂಬೆ ೧೪, ಸಿದ್ದಾಪುರದಲ್ಲಿ ೧೩ ಸೆಂಟಿ ಮೀಟರ್ ಮಳೆಯಾಗಿದೆ. ದಕ್ಷಿಣಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಭಾರೀ ಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆಯಿದೆ. ಉತ್ತರಕನ್ನಡ ಜಿಲ್ಲೆಯಲ್ಲಿಯೂ ಧಾರಾಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಹಗುರದಿಂದ ಮಳೆಯಾಗಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>